## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಬೆಳಗಾವಿ ಜಿಲ್ಲೆ, ಸವದತ್ತಿ ತಾಲ್ಲೂಕಿನ ಕರಿಕಟ್ಟಿ ಮತ್ತು ಇತರೆ 3 ಗ್ರಾಮಗಳ ಕುಡಿಯುವ ನೀರು ಸರಬರಾಜು ಯೋಜನೆಯ ಪುನಃಶ್ಚೇತನ ಕಾಮಗಾರಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

ಓದಲಾಗಿದೆ:
1. ದಿನಾಂಕ:17.01.2019ರ ರಾಜ್ಯ ಮಟ್ಟದ ಯೋಜನಾ ಮಂಜೂರಾತಿ ಸಭೆ ನಡವಳಿಗಳು.
2. ಮುಖ್ಯ ಇಂಜಿನಿಯರ್, RDWSD, ರವರ ಕಡತ ಸಂ:ಗ್ರಾಅಪ/ಗ್ರಾನೀಸ/ಮುಇಂ/ಸಇಂ-8/810 2018-19.

---

**ಪೀಠಿಕೆ:**

ಬೆಳಗಾವಿ ಜಿಲ್ಲೆ, ಸವದತ್ತಿ ತಾಲ್ಲೂಕಿನ ಕರಿಕಟ್ಟಿ ಮತ್ತು ಇತರೆ 3 ಗ್ರಾಮಗಳ ಕುಡಿಯುವ ನೀರು ಪೂರೈಕೆ ಯೋಜನೆಯನ್ನು 1998-99ನೇ ಸಾಲಿನಲ್ಲಿ ಜಲನಿರ್ಮಲ ಕಾರ್ಯಕ್ರಮದಡಿ ಅನುಷ್ಠಾನಗೊಳಿಸಲಾಗಿದೆ. ಈ ಯೋಜನೆಯು ಪೂರ್ಣಗೊಂಡು ಕಾರ್ಯಗತಗೊಳಿಸಿದ ನಂತರದಲ್ಲಿ ಸಮರ್ಪಕ ಕಾರ್ಯಾಚರಣೆ ಮತ್ತು ನಿರ್ವಹಣೆ ಕೈಗೊಳ್ಳದಿರುವ ಕಾರಣದಿಂದ ಯೋಜನೆ ಸ್ಥಗಿತಗೊಂಡಿದ್ದು, ಬಹಳಷ್ಟು ಐಟಂಗಳು ಅನುಪಯುಕ್ತ ಸ್ಥಿತಿಯಲ್ಲಿವೆ.

ದಿನಾಂಕ:17.01.2019ರಲ್ಲಿ ನಡೆದ ರಾಜ್ಯ ಮಟ್ಟದ ಯೋಜನಾ ಮಂಜೂರಾತಿ ಸಮಿತಿ (SLSSC) ಸಭೆಯಲ್ಲಿ ಈ ಯೋಜನೆಯ ಪುನಃಶ್ಚೇತನ ಕಾಮಗಾರಿಯ ಅಂದಾಜು ವೆಚ್ಚ ರೂ.330.00ಲಕ್ಷಗಳಿಗೆ ತಾತ್ವಿಕ ಒಪ್ಪಿಗೆ ನೀಡಲಾಗಿದೆ. ತದನಂತರ ದಿನಾಂಕ:14.02.2019ರಲ್ಲಿ ಸ್ಥಳ ಪರಿಶೀಲನೆ ನಡೆಸಿ, ಪರಿಶೀಲನಾ ವರದಿಯ ಅಂಶಗಳನ್ನು ಅಳವಡಿಸಿಕೊಳ್ಳಲಾಗಿದೆ. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆರವರು ಮೇಲೆ (2)ರಲ್ಲಿ ರೂ.460.00ಲಕ್ಷ ಅಂದಾಜು ಮೊತ್ತಕ್ಕೆ ಸಿದ್ಧಪಡಿಸಿದ ಪ್ರಸ್ತಾವನೆಗೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ಕೋರಿರುತ್ತಾರೆ. ಉದ್ದೇಶಿತ ಯೋಜನೆಯನ್ನು ಸುಸ್ಥಿತಿಯಲ್ಲಿಟ್ಟು 85 LPCD ಯಂತೆ ಸಮರ್ಪಕ ಹಾಗೂ ಶುದ್ಧ ಕುಡಿಯುವ ನೀರೊದಗಿಸುವ ಸಲುವಾಗಿ ಪುನಃಶ್ಚೇತನ ಕಾಮಗಾರಿಗೆ NRDWP (Coverage & WQ) ಕಾರ್ಯಕ್ರಮದಡಿ ಆಡಳಿತಾತ್ಮಕ ಅನುಮೋದನೆ ನೀಡಲು ನಿರ್ಧರಿಸಲಾಗಿದೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಕುನೀ&ನೈಇ 32 ಗ್ರಾನೀಸ(5)2019 ಬೆಂಗಳೂರು, ದಿನಾಂಕ:01.07.2019.**

ಪೀಠಿಕೆಯಲ್ಲಿನ ವಾಸ್ತವಾಂಶಗಳ ಹಿನ್ನೆಲೆಯಲ್ಲಿ, ಬೆಳಗಾವಿ ಜಿಲ್ಲೆ, ಸವದತ್ತಿ ತಾಲ್ಲೂಕಿನ ಕರಿಕಟ್ಟಿ ಮತ್ತು ಇತರೆ **3** ಗ್ರಾಮಗಳ ಕುಡಿಯುವ ನೀರು ಸರಬರಾಜು ಯೋಜನೆಯ ಪುನಃಶ್ಚೇತನ ಕಾಮಗಾರಿ ಹಾಗೂ 5 ವರ್ಷಗಳ ಕಾರ್ಯಾಚರಣೆ ಮತ್ತು ನಿರ್ವಹಣೆ (O&M) ಬಾಬ್ತು ಸೇರಿದಂತೆ ಅಂದಾಜು ಮೊತ್ತ **ರೂ.460.00ಲಕ್ಷ (ನಾಲ್ಕು ನೂರ ಅರವತ್ತು ಲಕ್ಷ ರೂಪಾಯಿಗಳು ಮಾತ್ರ)** ಗಳಿಗೆ NRDWP(C&Q) ಕಾರ್ಯಕ್ರಮದಡಿ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

3. **ಈ ಆದೇಶವು ಕೆಳಕಂಡ ಷರತ್ತುಗಳಿಗೆ ಒಳಪಟ್ಟಿರುತ್ತದೆ.**

(ಅ) ಗುತ್ತಿಗೆದಾರರು ಪುನಃಶ್ಚೇತನ ಕಾಮಗಾರಿಯನ್ನು ಉತ್ತಮ ಗುಣಮಟ್ಟದಲ್ಲಿ ಮತ್ತು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಿ ಕಾರ್ಯಗತಗೊಳಿಸಬೇಕು. ತದನಂತರ 5 ವರ್ಷಗಳ ಕಾಲ ಸದರಿ ಯೋಜನೆಯ ಸಂಪೂರ್ಣ ನಿರ್ವಹಣೆ ಮತ್ತು ಕಾರ್ಯಾಚರಣೆಯನ್ನು ಸದರಿ ಸಂಸ್ಥೆಯೇ ನಿರ್ವಹಿಸತಕ್ಕದ್ದು.

(ಆ) ಸದರಿ ಯೋಜನಾ ಕಾಮಗಾರಿಯನ್ನು 2019-20ರ ಸಾಲಿನ ಕ್ರಿಯಾ ಯೋಜನೆಯಲ್ಲಿ ಅಳವಡಿಸತಕ್ಕದ್ದು.

(ಇ) ಈ ಆದೇಶದಡಿ ಅನುಮೋದನೆಯಾದ ಯೋಜನೆಗೆ ಅಂದಾಜು ಮೊತ್ತದ ವ್ಯಾಪ್ತಿಯೊಳಗೆ CE/RDWSD ದೃಡೀಕರಿಸಿದ ತಾಂತ್ರಿಕ ಅನುಮೋದನೆಯನ್ವಯ ಪ್ರಗತಿ ಆಧರಿಸಿ ಅನುದಾನ ಬಿಡುಗಡೆಯಾಗಲಿದೆ. 2019-20ರ ಸಾಲಿನಲ್ಲಿ IMISನಡಿ ಒದಗಿಸಿರುವ ಅನುದಾನದ ವತಿಯಿಂದ ಯೋಜನೆಯನ್ನು ಅನುಷ್ಠಾನಗೊಳಿಸಬೇಕು. ಯೋಜನಾ ಅನುಷ್ಠಾನವನ್ನು ಚಾಲ್ತಿ ಪಾರದರ್ಶಕ (KTPP ಕಾಯಿದೆಯನ್ವಯ) ನೀತಿಯನ್ವಯವೇ ಮಾಡತಕ್ಕದ್ದು.

(ಈ) ಯೋಜನೆ ಅನುಷ್ಠಾನಗೊಂಡು ಗುತ್ತಿಗೆದಾರರ 5 ವರ್ಷಗಳ O&M ನಿರ್ವಹಣಾ ಅವಧಿ ಮುಗಿದ ನಂತರ ಯೋಜನೆಯ ಕಾರ್ಯಾಚರಣೆ ಮತ್ತು ನಿರ್ವಹಣೆಯ ಸಂಪೂರ್ಣ ಜವಾಬ್ದಾರಿಯನ್ನು ಹೊರಗುತ್ತಿಗೆ ಆಧಾರದ ಮೇಲೆ ಮಾಡಿಸಬೇಕು ಹಾಗೂ ಗ್ರಾಮಗಳ ಆಂತರಿಕ ಸರಬರಾಜು ವ್ಯವಸ್ಥೆಯನ್ನು ಸಂಬಂಧಿಸಿದ ಗ್ರಾಮ ಪಂಚಾಯತ್ ಮುಖೇನ ನಡೆಸಲು ಗ್ರಾಮ ಪಂಚಾಯತ್ ಠರಾವು ಆಧರಿಸಿ ಸೂಕ್ತ ವ್ಯವಸ್ಥೆ ಮಾಡತಕ್ಕದ್ದು.

(ಉ) ಸರ್ಕಾರದ ನೀತಿಯನ್ವಯ ಮನೆ ಸಂಪರ್ಕ ಮತ್ತು ಸ್ಟ್ಯಾಂಡ್ ಪೋಸ್ಟ್‌ಗಳಿಗೆ ಕಲ್ಪಿಸಿರುವ ಸಂಪರ್ಕದನ್ವಯ ನಿರ್ವಹಣೆ ವೆಚ್ಚಕ್ಕನುಗುಣವಾಗಿ ಅಗತ್ಯ ನೀರಿನ ಶುಲ್ಕ ಸಂಗ್ರಹಿಸತಕ್ಕದ್ದು ಹಾಗೂ ಮನೆ ಸಂಪರ್ಕಕ್ಕೆ ನೀರಿನ ಠೇವಣಿಯನ್ನು ಗ್ರಾಮ ಪಂಚಾಯತ್ ಠರಾವಿನನ್ವಯ ಸಂಗ್ರಹಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ಸರ್ಕಾರದ ಉಪ ಕಾರ್ಯದರ್ಶಿ (ಆಡಳಿತ)
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ -AG/A&E) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು-I – G&SSA- AUDIT) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು- II – E&RSA-) ಕರ್ನಾಟಕ, ಬೆಂಗಳೂರು.
4. ಮುಖ್ಯ ಇಂಜಿನಿಯರ್, ಗ್ರಾ.ಕು.ನೀ.&.ನೈ. ಇಲಾಖೆ, 1ನೇ ಮಹಡಿ, ಕೆ.ಹೆಚ್.ಬಿ. ಕಟ್ಟಡ, ಕಾವೇರಿಭವನ, ಬೆಂಗಳೂರು ಇವರಿಗೆ ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ.
5. ಅಧ್ಯಕ್ಷರು, ಜಿಲ್ಲಾ ಪಂಚಾಯತ್, **ಬೆಳಗಾವಿ.**
6. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, **ಬೆಳಗಾವಿ.**
7. ಅಧೀಕ್ಷಕ ಅಭಿಯಂತರರುಗಳು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವೃತ್ತ ಕಛೇರಿ **ಬೆಳಗಾವಿ**
8. ಮುಖ್ಯ ಲೆಕ್ಕಾಧಿಕಾರಿ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಕಾವೇರಿ ಭವನ ಬೆಂಗಳೂರು.
9. ಕಾರ್ಯಪಾಲಕ ಅಭಿಯಂತರರುಗಳು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, **ಬೆಳಗಾವಿ.**
10. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾ.ಅ. ಮತ್ತು ಪಂ. ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
11. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್ ಸಾಬ್‌ರವರ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು
12. ಆಯುಕ್ತರು, RDW&SD ಇವರ ಆಪ್ತ ಸಹಾಯಕರು.
13. ಆಂತರಿಕ ಆರ್ಥಿಕ ಸಲಹೆಗಾರರು, RDPR ಇಲಾಖೆ ಇವರ ಆಪ್ತ ಸಹಾಯಕರು.
14. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ "ಕರ್ನಾಟಕ ವಿಕಾಸ" ಗ್ರಾ.ಅ.ಪಂ.ರಾಜ್ ಇಲಾಖೆ, ಬೆಂಗಳೂರು.
15. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾ.ಅ.&.ಪಂ.ರಾಜ್ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು).
16. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ).
17. ಗ್ರಾಅಪಂ.ರಾಜ್ ಇಲಾಖೆಯ ಮಾಹಿತಿ ಕೇಂದ್ರ (10 ಪ್ರತಿಗಳು).
18. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.